# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103

ದೂರವಾಣಿ : 0816–2254546 0816–2255596, 0816–2255597 ಫ್ಯಾಕ್ಸ್ : 0816–2270719


ಸಂಖ್ಯೆ: ತುವಿ:ಶೈ.ವಿ:2022–23:/14024 ದಿನಾಂಕ:21.11.2022

## ಸುತ್ತೋಲೆ

ವಿಷಯ:– ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳಲಿರುವ ಸಂಶೋಧನಾರ್ಥಿಗಳನ್ನು **UUCMS - help desk** ನಲ್ಲಿ ಕಾರ್ಯನಿರ್ವಹಿಸುವಂತೆ ತಿಳಿಸುವ ಕುರಿತು.

ಉಲ್ಲೇಖ:– ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 21.11.2022

*****

ಸ್ನಾತಕೋತ್ತರ ಪ್ರವೇಶಾತಿ ಪ್ರಕ್ರಿಯೆಗೆ ಸಂಬಂಧಪಟ್ಟಂತೆ, ತುಮಕೂರು ವಿಶ್ವವಿದ್ಯಾನಿಲಯದಲ್ಲಿ UUCMS - help desk ನ್ನು ಸ್ಥಾಪಿಸಲಾಗಿದ್ದು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳಿಂದ ಇಬ್ಬರು ಪೂರ್ಣ ಕಾಲಿಕ ಸಂಶೋಧನಾರ್ಥಿಗಳನ್ನು ನಿಯೋಜಿಸಲು ತಿಳಿಸಿದೆ. ಡಾ. ಪಿ. ಸದಾನಂದ ಮಯ್ಯ ಕಟ್ಟಡದಲ್ಲಿರುವ ಕಂಪ್ಯೂಟರ್ ಲ್ಯಾಬ್‌ನಲ್ಲಿ UUCMS - help desk ಕಾರ್ಯನಿರ್ವಹಿಸಬೇಕಾಗಿದ್ದು, ದಿನಾಂಕ:22.11.2022 ರಿಂದ 09.12.2022ರವರೆಗೆ ಪ್ರತೀ ದಿನ ಅಪರಾಹ್ನ 12.00 ರಿಂದ 6.00 ವರೆಗೆ ನಿಯೋಜಿತ ಸಂಶೋಧನಾರ್ಥಿಗಳು ಕಾರ್ಯನಿರ್ವಹಿಸುವಂತೆ ತಿಳಿಸಿದೆ.

ಮುಂದುವರೆದು, ಎಲ್ಲಾ ಸ್ನಾತಕೋತ್ತರ ವಿಭಾಗಗಳಲ್ಲಿಯೂ ವಿಭಾಗವಾರು UUCMS-help desk ನ್ನು ಸ್ಥಾಪಿಸಿ, ವಿಭಾಗದ ಉಳಿದ ಸಂಶೋಧನಾರ್ಥಿಗಳು ಹಾಗೂ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ಸಿಬ್ಬಂದಿಗಳು ಆಯಾ ವಿಭಾಗಗಳಲ್ಲಿರುವ ಲಭ್ಯವಿರುವ ಕಂಪ್ಯೂಟರ್‌ಗಳನ್ನು ಬಳಸಿ UUCMS-help desk ನ ಕಾರ್ಯನಿರ್ವಹಿಸುವಂತೆ ಈ ಮೂಲಕ ತಿಳಿಸಿದೆ.

**UUCMS-help desk** ನ ಕಾರ್ಯ:–

1. ಸ್ನಾತಕೋತ್ತರ ಪದವಿಗಳಿಗೆ ಅರ್ಜಿ ಸಲ್ಲಿಸಲು ಬಯಸುವ ವಿದ್ಯಾರ್ಥಿಗಳಿಗೆ ಸಂಪೂರ್ಣ ಸಹಕಾರ ನೀಡುವುದು.
2. ವಿವಿಧ ಸ್ನಾತಕೋತ್ತರ ವಿಭಾಗಗಳ ಕುರಿತು ಮಾಹಿತಿ ನೀಡುವುದು.
3. ಅರ್ಜಿ ಸಲ್ಲಿಸುವ ಪ್ರತೀ ವಿದ್ಯಾರ್ಥಿಗಳ ಪರವಾಗಿ ಪ್ರತೀ ಹಂತದಲ್ಲಿಯೂ ವಿದ್ಯಾರ್ಥಿಗಳಿಗೆ ಸಹಕಾರ ನೀಡಿ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಳಿಸುವುದು.

ಕರಡು ಪತ್ರ ಮಾನ್ಯ ಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ.

ಆದೇಶದ ಮೇರೆಗೆ,

Mangalaham M

ಉಪಕುಲಸಚಿವರು

ಉಪಕುಲ ಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಅಧ್ಯಕ್ಷರು / ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಮತ್ತು ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಂಯೋಜಕರು, ಶಿರಾ ಸ್ನಾತಕೋತ್ತರ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ಭುವನಹಳ್ಳಿ, ಶಿರಾ – 572 139.
4. ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತಿಪಟೂರು – 572 201.

(ಪು.ತಿ.ನೋ)

**ಪ್ರತಿಗಳು:**

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ನಿರ್ದೇಶಕರು, ಸಂಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – **ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.**
4. ಕಚೇರಿ ಪ್ರತಿ

e:\pg backup dt18.1.2022\shivamurthy\sangeetha\new folder\pg kan ltrs 2021-22.docx